# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 816 |
| ಮಾನ್ಯ ಸದಸ್ಯರ ಹೆಸರು | : | ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 26.12.2022 |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು; ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇರುವ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು; (ಸರ್ಕಾರಿ ಮತ್ತು ಖಾಸಗಿ ತಾಂತ್ರಿಕ ಕಾಲೇಜುವಾರು ವಿವರ ನೀಡುವುದು) | ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಕೆಳಕಂಡಂತೆ ಅರೆಕಾಲಿಕ ಉಪನ್ಯಾಸಕರುಗಳ ಸೇವೆಯನ್ನು 2022-23ನೇ ಸಾಲಿನ ಆರ್ಥಿಕ ವರ್ಷದ ಅಂತ್ಯದವರೆಗೆ ಪಡೆಯಲು ಸರ್ಕಾರದಿಂದ ಅನುಮತಿ ನೀಡಲಾಗಿದೆ. |

| ಸಂಸ್ಥೆ | ಸಂಖ್ಯೆ |
|---|---|
| ಸರ್ಕಾರಿ ಇಂಜಿನಿಯರಿಂಗ್ ಕಾಲೇಜು | 339 |
| ಸರ್ಕಾರಿ ಪಾಲಿಟೆಕ್ನಿಕ್ | 1301 |

ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ವಿವರ ಕೆಳಕಂಡಂತಿವೆ.

| ಕ್ರ. ಸಂ. | ಸಂಸ್ಥೆಯ ಹೆಸರು | ಅರೆಕಾಲಿಕ ಉಪನ್ಯಾಸಕರ ಸಂಖ್ಯೆ |
|---|---|---|
| | **ಉಡುಪಿ ಜಿಲ್ಲೆ** | |
| 1. | ಸರ್ಕಾರಿ ಪಾಲಿಟೆಕ್ನಿಕ್, ಉಡುಪಿ | 10 |
| 2. | ಸರ್ಕಾರಿ ಪಾಲಿಟೆಕ್ನಿಕ್, ಕಾರ್ಕಳ | 20 |
| | **ದಕ್ಷಿಣ ಕನ್ನಡ ಜಿಲ್ಲೆ** | |
| 1. | ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್, ಮಂಗಳೂರು | 66 |
| 2. | ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಮಂಗಳೂರು | 24 |
| 3. | ಸರ್ಕಾರಿ ಪಾಲಿಟೆಕ್ನಿಕ್, ಬಂಟ್ವಾಳ | 24 |
| 4. | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಮಂಗಳೂರು | 08 |
| | **ಒಟ್ಟು** | **152** |

| | | |
|---|---|---|
| ಆ) | ರಾಜ್ಯದ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಗೌರವಧನ ಎಷ್ಟು; ಅವರಿಗೆ ಇರುವ ಕಾರ್ಯಭಾರ ಎಷ್ಟು; ಅವರ ಸೇವಾ ನಿಯಮಗಳು ಯಾವುವು; ಅವರಿಗೆ ನೀಡುತ್ತಿರುವ ಸೌಲಭ್ಯಗಳು ಯಾವುದು; ಸದರಿ ಅರೆಕಾಲಿಕ ಉಪನ್ಯಾಸಕರ ಬೇಡಿಕೆ ಕುರಿತು ಪರಿಶೀಲನೆ ನಡೆಸಿದ ಕುಮಾರ ನಾಯಕ್ ಸಮಿತಿ ವರದಿಯನ್ನು ನೀಡಿದೆಯೇ;(ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ:ಇಡಿ 16 ಟಿಪಿಇ 2017, ದಿನಾಂಕ:11.12.2019 ಮತ್ತು ಸರ್ಕಾರದ ಪತ್ರ ಸಂಖ್ಯೆ:ಇಡಿ 174 ಡಿಟಿಇ 2020, ದಿನಾಂಕ:22.12.2020 ರಲ್ಲಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅರೆಕಾಲಿಕ ಉಪನ್ಯಾಸಕರ ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆಗೆ, ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.15,000/- ಗಳನ್ನು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿನ ಅರೆಕಾಲಿಕ ಉಪನ್ಯಾಸಕರ ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆಗೆ, ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.12,500/- ಗಳನ್ನು ನಿಗದಿಪಡಿಸಲಾಗಿದೆ.<br><br>ಶ್ರೀ ಕುಮಾರ ನಾಯಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯ ವರದಿಯು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳಕ್ಕೆ ಸಂಬಂಧಿಸಿದ್ದಾಗಿರುತ್ತದೆ. |

**ಇಡಿ 144 ಟಿಪಿಇ 2022**

**(ಡಾ|| ಅಶ್ವತ್ಥನಾರಾಯಣ್.ಸಿ.ಎನ್)**
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಇಲಾಖೆ ಸಚಿವರು